ಮಲೆನಾಡು ಅಭಿವೃದ್ಧಿ ಮಂಡಳಿಯ ಅಭಿವೃದ್ಧಿ ಕಾರ್ಯಕ್ರಮಗಳು.

1633(2278) ಶ್ರೀ ಕೆ.ಎಸ್. ಈಶ್ವರಪ್ಪ (ಶಿವಮೊಗ್ಗ) :— ಮಾನ್ಯ ಪ್ರದೇಶಾಭಿವೃದ್ಧಿ ಮತ್ತು ಕಾಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಮಲೆನಾಡು ಅಭಿವೃದ್ಧಿ ಮಂಡಳಿವತಿಯಿಂದ ಅಭಿವೃದ್ಧಿ ಕಾರ್ಯಕ್ರಮಗಳನ್ನು ಜಾರಿಗೊಳಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ ಈ ಕಾಮಗಾರಿಗಳಿಗೆ ವಾರ್ಷಿಕವಾಗಿ ನಿಗದಿಪಡಿಸಿದ ಅನುದಾನವನ್ನು ಮಲೆನಾಡು ಅಭಿವೃದ್ಧಿ ಮಂಡಳಿಗೆ ಸರ್ಕಾರ ಬಿಡುಗಡೆ ಮಾಡಿದೆಯೇ;

ಇ) ಹಾಗಿಲ್ಲದಿದ್ದಲ್ಲಿ, ಈ ಹಣ ಬಿಡುಗಡೆಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು?

ಶ್ರೀ ಕೆ. ವೆಂಕಟೇಶ್ (ಪ್ರದೇಶಾಭಿವೃದ್ಧಿ ಮತ್ತು ಕಾಡಾ ರಾಜ್ಯ ಸಚಿವರು) :—

ಅ) ಬಂದಿದೆ.

ಆ)ಇ) ಸಂಪನ್ಮೂಲಗಳನ್ನು ಆಧಾರಿಸಿ ಹಣ ಬಿಡುಗಡೆ ಮಾಡಲಾಗಿದೆ.

ಮಲಪ್ರಭಾ ಮತ್ತು ಮಹಾದಾಯಿ ನದಿಗಳ ಜೋಡಣೆ.

1634(2293) ಶ್ರೀ ಜಗದೀಶ್ ಶೆಟ್ಟರ್ (ಹುಬ್ಬಳ್ಳಿ ಗ್ರಾಮೀಣ) :— ಮಾನ್ಯ ಭಾರಿ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಮಲಪ್ರಭಾ ಮತ್ತು ಮಹಾದಾಯಿ ನದಿಗಳ ಜೋಡಣೆಯ ಯೋಜನೆಯ ವಿಚಾರ ಕುರಿತು ಗೋವಾ ಸರ್ಕಾರದ ಜೊತೆ ಮಾತುಕತೆ ನಡೆಸಲು ಉದ್ದೇಶಿಸಲಾಗಿದೆಯೇ?

ಆ) ಹಾಗಿದ್ದಲ್ಲಿ ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು?

ಶ್ರೀ ಕೆ.ಎನ್. ನಾಗೇಗೌಡ (ಭಾರಿ ನೀರಾವರಿ ಸಚಿವರು) :—

ಅ) ಈಗಾಗಲೇ ಎರಡು ಸರ್ಕಾರಗಳ ಮಧ್ಯೆ ಮಾತುಕತೆ ನಡೆದಿದೆ.

ಆ) ಗೋವಾ ಸರ್ಕಾರದ ಸಹಮತಿ ಪಡೆಯಲು ಪತ್ರ ವ್ಯವಹಾರ ಮುಂದುವರೆದಿದೆ.